# All India Radio: Bangalore
## ಆಕಾಶವಾಣಿ ಬೆಂಗಳೂರು
### ಪ್ರದೇಶ ಸಮಾಚಾರ
### 11.04.2024 / 6.40 p.m.

**ಮುಖ್ಯಾಂಶಗಳು**

- **ರಾಜ್ಯದಲ್ಲಿ ಚುನಾವಣೆಗೆ ೧೪ ದಿನಗಳು ಮಾತ್ರ ಬಾಕಿ; ನಾಳೆಯಿಂದ ಎರಡನೇ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆ**
- **ಸುರಪುರ ವಿಧಾನಸಭಾ ಉಪಚುನಾಣೆಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ; ಏಪ್ರಿಲ್ ೧೯ ಕಡೆಯ ದಿನ**
- **ರಾಜ್ಯದಲ್ಲಿ ಮೊದಲ ಹಂತದ ಚುನಾವಣೆಗೆ ಸಿದ್ಧತೆ; ವೀರ ಯೋಧರಿಗೆ ಅಂಚೆ ಮತದಾನಕ್ಕೆ ಅವಕಾಶ**
- **ರಾಜ್ಯಾದ್ಯಂತ ಸಡಗರ ಸಂಭ್ರಮದ ರಂಜಾನ್ ಆಚರಣೆ**

*****************

ಹಾವೇರಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದ್ದು, ಏಪ್ರಿಲ್ ೧೯ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ರಘುನಂದನ್ ಮೂರ್ತಿ

ದಾವಣಗೆರೆ ಲೋಕಸಭಾ ಕ್ಷೇತ್ರದ ಚುನಾವಣೆಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭವಾಗಲಿದ್ದು, ಇದೇ ೧೯ ಕಡೆಯ ದಿನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಹೇಳಿದ್ದಾರೆ.

ಧ್ವನಿ : ಎಂ. ವೆಂಕಟೇಶ್

ಲೋಕಸಭಾ ಚುನಾವಣೆಗೆ ನಾಳೆಯಿಂದ ನಾಮಪತ್ರಗಳ ಸಲ್ಲಿಕೆ ಆರಂಭಗೊಳ್ಳಲಿದ್ದು, ಈ ಕುರಿತಂತೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದರು. ನಾಮಪತ್ರಗಳ ಸಲ್ಲಿಕೆಗೆ ಏಪ್ರಿಲ್ ೧೯ ಕೊನೆಯ ದಿನವಾಗಿದ್ದು, ೨೦ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನಾಮಪತ್ರಗಳನ್ನು ಹಿಂಪಡೆಯಲು ೨೨ ಕೊನೆಯ ದಿನವಾಗಿದ್ದು, ಮೇ ೭ ರಂದು ಮತದಾನ ನಡೆಯಲಿದೆ ಎಂದು ಹೇಳಿದರು.

ರಾಯಚೂರಿನಲ್ಲಿ ಲೋಕಸಭಾ ಚುನಾವಣೆಗೆ ನಾಳೆಯಿಂದ ಅಭ್ಯರ್ಥಿಗಳು ನಾಮಪತ್ರಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ಎಲ್.ಚಂದ್ರಶೇಖರ ನಾಯಕ ತಿಳಿಸಿದ್ದಾರೆ.

ಕೊಪ್ಪಳದಲ್ಲಿ ಮೇ ೦೭ ರಂದು ಲೋಕಸಭಾ ಚುನಾವಣೆ ನಡೆಯಲಿದ್ದು, ನಾಳೆಯಿಂದ ಇದೇ ೧೯ ರವರೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಲಿನ್ ಅತುಲ್ ತಿಳಿಸಿದ್ದಾರೆ.

*****************

ಯಾದಗಿರಿ ಜಿಲ್ಲೆಯ ಸುರಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭವಾಗಲಿದೆ. ನಾಮಪತ್ರ ಸಲ್ಲಿಕೆಗೆ  ಇದೇ ಏಪ್ರಿಲ್ ೧೯ ಕಡೆಯ ದಿನವಾಗಿದೆ ಎಂದು ಯಾದಗಿರಿ ಜಿಲ್ಲೆಯ ಸುರಪುರ ಚುನಾವಣಾಧಿಕಾರಿ ಕೆ.ವಿ.ಕಾವ್ಯಾರಾಣಿ ಹೇಳಿದ್ದಾರೆ. ಸರಕಾರಿ ರಜೆ ದಿನಗಳನ್ನು ಹೊರತುಪಡಿಸಿ ಉಳಿದ ದಿನ ನಾಮಪತ್ರ ಸ್ವೀಕರಿಸಲಾಗುವುದು ಎಂದು ತಿಳಿಸಿದರು.

ಮೇ ೭ರಂದು ಉಪಚುನಾವಣೆ ನಡೆಯಲಿದ್ದು, ಜೂನ್ ೦೪ರಂದು ಫಲಿತಾಂಶ ಹೊರ ಬೀಳಲಿದೆ. ಉಪಚುನಾವಣೆ ದಿನಾಂಕ ಪ್ರಕಟವಾದ ದಿನದಿಂದಲೇ ನೀತಿ ಸಂಹಿತೆ ಜಾರಿಗೆ ಬಂದಿದೆ. ಕ್ಷೇತ್ರವು ಪರಿಶಿ? ಪಂಗಡ ಜಾತಿಗೆ ಮೀಸಲಾಗಿದ್ದು, ಅಭ್ಯರ್ಥಿಯು ೫ ಸಾವಿರ ಠೇವಣಿಯೊಂದಿಗೆ ನಾಮಪತ್ರ ಸಲ್ಲಿಸಬಹುದಾಗಿದೆ.

ಉತ್ತರಕನ್ನಡ ಜಿಲ್ಲೆಯ ಲೋಕಸಭಾ ಚುನಾವಣೆಗೆ ಸಂಬಂದಿಸಿದಂತೆ, ನಾಳೆಯಿಂದ ನಾಮಪತ್ರಗಳ ಸಲ್ಲಿಕೆ ಆರಂಭಗೊಳ್ಳಲಿದೆ. ಹೀಗಾಗಿ ಚೆಕ್‌ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ತಪಾಸಣಾ ಕಾರ್ಯ ಕೈಗೊಳ್ಳಬೇಕು. ಯಾವುದೇ ಲೋಪವಾದಲ್ಲಿ ಸಂಬಂಧಪಟ್ಟ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಎಚ್ಚರಿಕೆ ನೀಡಿದ್ದಾರೆ.

*****************

ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರಕ್ಕೆ ಇದೇ ೨೬ ರಂದು ಚುನಾವಣೆ ನಡೆಯಲಿದ್ದು, ಚುನಾವಣಾ ಯಶಸ್ಸಿಗೆ ಜಿಲ್ಲಾಡಳಿ ಸಕಲ ಸಿದ್ಧತೆ ನಡೆಸಿದೆ.  ಮತದಾನದ  ದಿನದಂದು ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಲ್ಲಾ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳ ಮಾಲೀಕರು ಅರ್ಹ ಮತದಾರರಾಗಿರುವ ಎಲ್ಲಾ ಖಾಯಂ ಅಥವಾ ದಿನಗೂಲಿ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಒಂದು ದಿನದ ವೇತನ ಸಹಿತ ರಜೆ ನೀಡಬೇಕು ಎಂದು ಮಂಗಳೂರು ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಡುಪಿಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಅಧಿಕಾರಿಗಳು ನಾನಾ ಕಸರತ್ತುಗಳನ್ನು ನಡೆಸುತ್ತಿದ್ದಾರೆ.  ಮುಂಬರುವ ಲೋಕಸಭಾ ಚುನಾವಣೆಗಾಗಿ ಮತದಾನ ಜಾಗೃತಿಯಲ್ಲಿ ಉಡುಪಿ ಜಿಲ್ಲಾಡಳಿತ ತೊಡಗಿದೆ. ಈ ಹಿನ್ನೆಲೆ ಮತದಾನ

ಜಾಗೃತಿಗಾಗಿ ಸ್ವೀಪ್ ಸಮಿತಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ರಾಜ್ಯದಲ್ಲೇ ವಿಶೇಷ ಎಂಬಂತೆ ಜಿಲ್ಲೆಯ ಐಎಎಸ್, ಐಪಿಎಸ್ ಹಾಗೂ ಕೆಎಎಸ್ ಅಧಿಕಾರಿಗಳು ಯಕ್ಷಗಾನ ವೇಷಧರಿಸಿ ಮತದಾನ ಮಾಡುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಗಮನಸೆಳೆದಿದ್ದಾರೆ.

ಭಾರತದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕೋಲಾರ ಜಿಲ್ಲೆಯ ವೀರ ಸೈನಿಕರಿಗೆ, ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಮಾಡುವಂತೆ, ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ಅಂಚೆ ಪತ್ರವನ್ನು ರವಾನಿಸಿದರು.

ಹಾಸನದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಇದೇ ತಿಂಗಳ ೨೪ ರಿಂದ ೨೬ರ ರಾತ್ರಿ ೧೨ ಗಂಟೆಯವರೆಗೆ ರೆಸಾರ್ಟ್ಸ್, ಹೋಟೆಲ್‌ಗಳು ಮತ್ತು ಹೋಂಸ್ಟೇಗಳಲ್ಲಿ ವಾಸ್ತವ್ಯ ನಿಷೇಧ ಮಾಡಿ ಜಿಲ್ಲಾ ಚುನಾವಣಾಧಿಕಾರಿ ಸಿ.ಸತ್ಯಭಾಮ ಆದೇಶ ಹೊರಡಿಸಿದ್ದಾರೆ.

*****************

ಬೆಂಗಳೂರಿನಲ್ಲಿ ಲೋಕಸಭಾ ಚುನಾವಣೆಯ ಅಂಗವಾಗಿ ಚುನಾವಣಾ ಆಯೋಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಹಯೋಗದಲ್ಲಿ ವಿಧಾನಸೌಧದ ಮುಂಭಾಗ ಮತದಾನ ಜಾಗೃತಿಯ ಸೈಕಲ್ ಜಾಥಾ ನಡೆಯಿತು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಚಾಲನೆ ನೀಡಿದರು. ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಏಪ್ರಿಲ್ ೨೬ ರಂದು ನಡೆಯುವ ಮತದಾನದ ಹಬ್ಬವನ್ನು ಎಲ್ಲರೂ ಸೇರಿ ಒಟ್ಟಾಗಿ ಆಚರಿಸೋಣವೆಂದು ಎಂದು ತಿಳಿಸಿದರು.

*****************

ಮಂಡ್ಯ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಕಳೆದ ಮಾರ್ಚ್ ೧೬ ರಿಂದ ಈವರೆಗೆ ಚೆಕ್‌ಪೋಸ್ಟ್‌ಗಳ ತಪಾಸಣಾ ಕೇಂದ್ರದ ಬಳಿ ಅಕ್ರಮವಾಗಿ ಸಾಗಿಸುತ್ತಿದ್ದ ಒಂದು ಕೋಟಿ ಆರು ಲಕ್ಷ ಎಂಟು ಸಾವಿರದ ಒಂಬೈನೂರ ತೊಂಬತ್ತು ರೂಪಾಯಿ ನಗದನ್ನು ವಶಕ್ಕೆ ಪಡೆಯಲಾಗಿದೆ.

ಅಲ್ಲದೇ ಒಂದು ಕೋಟಿ ೪ ಲಕ್ಷ ೭೬ ಸಾವಿರದ ಆರುನೂರ ೯೯ ರೂಪಾಯಿ ಬೆಲೆ ಬಾಳುವ ೪೬ ಸಾವಿರದ ೪೮೨ ಲೀಟರ್ ಮದ್ಯವನ್ನು ವಶಕ್ಕೆ ಪಡೆಯಲಾಗಿದೆ. ಅದರ ಜೊತೆಗೆ ಎರಡು ಲಕ್ಷ ೧೭ ಸಾವಿರದ ೪೦ ರೂಪಾಯಿ ಬೆಲೆ ಬಾಳುವ ಐದು ಕೆ.ಜಿ. ೭೦೪ ಗ್ರಾಂ ಗಾಂಜಾ ಮತ್ತು ೪೦ ಸಾವಿರ ರೂಪಾಯಿ ಬೆಲೆ ಬಾಳುವ ಸೀರೆಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

*****************

ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ಗೆ ನೀಡುವ ಮತ ಭ್ರಷ್ಟಾಚಾರಕ್ಕೆ ನೀಡಿದಂತೆ ಎಂದು ಹೇಳಿದ್ದಾರೆ.

ಕೋಲಾರದಲ್ಲಿ ಮಾತನಾಡಿದ ಆರ್.ಅಶೋಕ್, ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ್ದು, ಅನ್ನಭಾಗ್ಯವಲ್ಲ ಎಂದು ಲೇವಡಿ ಮಾಡಿದರು.

ಇನ್ನೊಂದೆಡೆ ಬೆಂಗಳೂರಿನಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜನರು ದಡ್ಡರಲ್ಲ, ತಮ್ಮ ಬದುಕು ಯಾರು ಕಟ್ಟಿಕೊಡುತ್ತಾರೆ ಅವರಿಗೆ ಬೆಂಬಲ ನೀಡುತ್ತಾರೆ ಎಂದು ಹೇಳಿದ್ದಾರೆ.

*****************

ಈಗ ಕೋಲಾರ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಮುನಿರಾಜ.ಎಂ,

ಚಿನ್ನದ ನಾಡು, ಮಾವಿನ ಬೀಡು ಎಂದು ಖ್ಯಾತವಾದ ಕೋಲಾರ ಲೋಕಸಭಾ ಕ್ಷೇತ್ರ ಪರಿಶಿಷ್ಟ ಜಾತಿಗೆ ಮೀಸಲಾಗಿದೆ. ಆಂಧ್ರಪ್ರದೇಶ ಮತ್ತು ತಮಿಳುನಾಡು ಗಡಿಭಾಗಕ್ಕೆ ಹೊಂದಿಕೊಂಡಿದ್ದು, ಹಲವು ವಿಶೇಷತೆಗಳನ್ನು ಕೋಲಾರ ಜಿಲ್ಲೆ ಒಳಗೊಂಡಿದೆ.

ಕೋಲಾರ ಲೋಕಸಭಾ ಕ್ಷೇತ್ರದ ಚುನಾವಣೆ ರಾಜ್ಯದಲ್ಲಿ ಮೊದಲನೇ ಹಂತದಲ್ಲಿ ಏಪ್ರಿಲ್ ೨೬ರಂದು ನಡೆಯಲಿದೆ. ಈಗಾಗಲೇ ನಾಮಪತ್ರ ಸಲ್ಲಿಕೆ ಮತ್ತು ನಾಮಪತ್ರ ಹಿಂಪಡೆಯುವಿಕೆ ಪ್ರಕ್ರಿಯೆ ಮುಗಿದಿದ್ದು, ಅಂತಿಮ ಕಣದಲ್ಲಿ ೧೮ ಅಭ್ಯರ್ಥಿಗಳಿದ್ದಾರೆ.

ಜಿಲ್ಲಾಡಳಿತ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳುತ್ತಿದೆ. ಕೋಲಾರ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ೮ ವಿಧಾನಸಭಾ ಕ್ಷೇತ್ರಗಳು ಬರುತ್ತವೆ. ಶ್ರೀನಿವಾಸಪುರ, ಮುಳಬಾಗಿಲು, ಕೆ.ಜಿ.ಎಫ್, ಬಂಗಾರಪೇಟೆ, ಕೋಲಾರ, ಮಾಲೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ, ಚಿಂತಾಮಣಿ ಕ್ಷೇತ್ರಗಳನ್ನು ಒಳಗೊಂಡಿದೆ.

ಕೋಲಾರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ೨೩ ಲಕ್ಷ ೪೭ ಸಾವಿರದ ೬೦೪ ಜನಸಂಖ್ಯೆ ಇದೆ. ಮತಕ್ಷೇತ್ರದಲ್ಲಿ ಒಟ್ಟು ೧೭ ಲಕ್ಷ ೮ ಸಾವಿರದ ೫೬೫ ಮತದಾರರಿದ್ದು, ಈ ಪೈಕಿ ೮ ಲಕ್ಷ ೪೫ ಸಾವಿರದ ೯೩೬ ಪುರುಷರು, ೮ ಲಕ್ಷದ ೬೨ ಸಾವಿರದ ೭೧೬ ಮಹಿಳೆಯರು, ೨೧೩ ತೃತೀಯಲಿಂಗಿ ಮತದಾರರಿದ್ದಾರೆ.

೮೦ ವರ್ಷಕ್ಕೂ ಮೇಲ್ಪಟ್ಟ ಹಿರಿಯ ನಾಗರಿಕರು ೩೭ ಸಾವಿರದ ೫೪ ಮತದಾರಿದ್ದು, ೮೫ ವರ್ಷಕ್ಕೂ ಮೇಲ್ಪಟ್ಟ ಹಿರಿಯನಾಗರಿಕರು ೧೭ ಸಾವಿರದ ೬೩೪ ಮಂದಿ ಇದ್ದಾರೆ. ಈ ಬಾರಿ ೩೦ ಸಾವಿರದ ೫೪ ಯುವ ಮತದಾರರು ನೋಂದಣಿಯಾಗಿದ್ದು, ಮೊದಲ ಬಾರಿಗೆ ಮತದಾನ ಮಾಡುವ ಉತ್ಸಾಹದಲ್ಲಿದ್ದಾರೆ.

ಚುನಾವಣಾ ಅಕ್ರಮ ತಡೆಗಾಗಿ ಜಿಲ್ಲೆಯಾದ್ಯಂತ ೩೪ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ. ಲೋಕಸಭಾ ಕ್ಷೇತ್ರದಲ್ಲಿ ೨ ಸಾವಿರದ ೭೦ ಮತದಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಅದರಲ್ಲಿ ೭೫ ಮತದಾನ ಕೇಂದ್ರಗಳನ್ನು ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ದಿವ್ಯಾಂಗರಿಗೆ ಮನೆಯಲ್ಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಮಹಿಳಾ ಸ್ನೇಹಿಯಾಗಿ ೩೦ ಸಖಿ ಪಿಂಕ್ ಬೂತ್ ಇರಲಿವೆ.

ವಿಶೇಷಚೇತನರೇ ಕಾರ್ಯನಿರ್ವಹಿಸುವ ೬ ಮತಗಟ್ಟೆಗಳು ಮತ್ತು ೨೦ ವರ್ಷದ ಆಸುಪಾಸಿನ ಯುವ ಸಿಬ್ಬಂದಿಯಿಂದ ಕೂಡಿದ ೭ ಮತಗಟ್ಟೆಗಳು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಲಿದ್ದು, ಇದು ವಿಶೇಷವಾಗಿದೆ.

ಪ್ರತಿಯೊಬ್ಬರೂ ತಪ್ಪದೇ ಕಡ್ಡಾಯವಾಗಿ ಏಪ್ರಿಲ್ ೨೬ ರಂದು ಮತ ಚಲಾಯಿಸಬೇಕು. ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಉತ್ಸಾಹದಿಂದ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಚುನಾವಣಾ ಅಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ.

*****************

ಚಾಮರಾಜನಗರ ಜಿಲ್ಲೆಯ ೫ ತಾಲೂಕುಗಳನ್ನು ಬರಗಾಲ ಪೀಡಿತ ತಾಲೂಕುಗಳೆಂದು ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ೧ ರಿಂದ ೧೦ನೇ ತರಗತಿ ಮಕ್ಕಳಿಗೆ ಬೇಸಿಗೆ ರಜಾ ಅವಧಿಯಲ್ಲಿಯೂ ಬಿಸಿಯೂಟ ಕಾರ್ಯಕ್ರಮವನ್ನು ಏಪ್ರಿಲ್ ೧೧ ರಿಂದ ಮೇ ೨೮ರವರೆಗೆ ೪೧ ದಿನಗಳ ಕಾಲ ಮುಂದುವರೆಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಮಕ್ಕಳ ಪೋಷಕರು ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದ್ದಾರೆ.

*****************

ರಾಜ್ಯದೆಲ್ಲೆಡೆ ರಂಜಾನ್ ಹಬ್ಬದ ಸಂಭ್ರಮ ಮನೆ ಮಾಡಿದೆ. ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡರು.

ಮುಸ್ಲಿಂ ಬಾಂಧವರು ಪವಿತ್ರ ರಂಜಾನ್ ಹಬ್ಬವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ನೆಲಮಂಗಲ, ಹೊಸಕೋಟೆ ಹಾಗೂ ದೇವನಹಳ್ಳಿ ತಾಲೂಕುಗಳಲ್ಲಿ ಸಡಗರ, ಸಂಭ್ರಮದಿಂದ ಆಚರಿಸಿದರು.

ಕೋಲಾರ ಜಿಲ್ಲಾದ್ಯಂತ ಈದ್ ಉಲ್ ಫಿತರ್ ಹಬ್ಬವನ್ನು ಮಸೀದಿ, ಈದ್ಗಾ ಮೈದಾನಗಳಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸುವ ಮೂಲಕ ಆಚರಿಸಿದರು.

ಗದಗ ಜಿಲ್ಲೆಯಾದ್ಯಂತ ರಂಜಾನ್ ಹಬ್ಬವನ್ನು ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಆಚರಿಸಿದರು.

ವಿಜಯಪುರದಲ್ಲಿ ಮುಸ್ಲಿಂ ಸಮುದಾಯದವರು ಸಂಭ್ರಮ ಸಡಗರದಿಂದ 'ಈದ್ ಉಲ್-ಫಿತರ್ ಹಬ್ಬವನ್ನು ಆಚರಿಸಿದರು.

ವಿಜಯನಗರ ಜಿಲ್ಲೆಯ ಗುಲಾಬ್ ಶಾ ವಲಿ ದರ್ಗಾ ಈದ್ಗ ಮೈದಾನದಲ್ಲಿ ರಂಜಾನ್ ಹಬ್ಬವನ್ನು ಸಾವಿರಾರು ಮುಸ್ಲಿಂ ಬಾಂಧವರು ಆಚರಿಸಿದರು.

*****************

ವಿದ್ಯುತ್ ತಿದ್ದುಪಡಿ ನಿಯಮಗಳ ೨೦೨೩ ಪ್ರಕಾರ ದಿನದ ಸಮಯ ಯೋಜನೆಯನ್ನು ತ್ವರಿತವಾಗಿ ಜಾರಿಗೊಳಿಸಲು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಮನವಿ ಸಲ್ಲಿಸಿದೆ.

ಆಯೋಗವನ್ನು ಉದ್ದೇಶಿಸಿ ಎಫ್‌ಕೆಸಿಸಿಐ ಬರೆದ ಪತ್ರದಲ್ಲಿ, ೧೦ ಕಿಲೋವಾಟ್ಸ್‌ಗಿಂತ ಹೆಚ್ಚಿನ ಗರಿಷ್ಠ ಬೇಡಿಕೆಯನ್ನು ಹೊಂದಿರುವ ಕೈಗಾರಿಕಾ ಮತ್ತು ವಾಣಿಜ್ಯ ಗ್ರಾಹಕರಿಗೆ ಟಿಒಡಿ ಯೋಜನೆಯನ್ನು ಪರಿಚಯಿಸುವ ಪ್ರಾಮುಖ್ಯತೆಯನ್ನು ತಿಳಿಸಿರುತ್ತದೆ. ಇದು ಇಂಧನ ಬಳಕೆ ಮತ್ತು ದರವನ್ನು ಸಾಮಾನ್ಯ ದರದ ೧.೨೦ ಪಟ್ಟು ಕಡಿಮೆಯಿರಬಾರದು. ಇತರ ಗ್ರಾಹಕರಿಗೆ, ಇದು ಸಾಮಾನ್ಯ ದರಕ್ಕಿಂತ ೧.೧೦ ಪಟ್ಟು ಕಡಿಮೆಯಿರಬಾರದೆಂದು ತಿಳಿಸಿದೆ.

ಮೀಟರಿಂಗ್ ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ ಎಫ್.ಕೆ.ಸಿ.ಸಿ.ಐ. ಸ್ಪಷ್ಟ ನಿರ್ದೇಶನಗಳನ್ನು ಕೋರಿ, ಸ್ಮಾರ್ಟ್ ಮೀಟರ್‌ಗಳ ಅಳವಡಿಕೆಗೆ ಸಲಹೆ ನೀಡಿದೆ. ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ ವಿಳಂಬವಾದರೆ, ಟಿಒಡಿ ಯೋಜನೆಯ ಸಮಯೋಚಿತ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಮತ್ತು ಇಂಧನ ಬಳಕೆಯ ಮಾದರಿಗಳನ್ನು ಉತ್ತೇಜಿಸಲು ಅನ್ವಯವಾಗುವ ಗ್ರಾಹಕರಿಗೆ ಟಿಒಡಿ ಮೀಟರ್‌ಗಳನ್ನು ಆಯ್ಕೆ ಮಾಡಲು ಆಯೋಗವು ಮಾರ್ಗದರ್ಶನ ನೀಡಬೇಕೆಂದು ಒತ್ತಾಯಿಸಿದೆ.

*****************

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗದ ವಿದ್ಯಾರ್ಥಿಗಳು ಫಲಿತಾಂಶವನ್ನು ಉತ್ತಮ ಪಡಿಸಿಕೊಳ್ಳಲು ೨ನೇ ಪರೀಕ್ಷೆಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಇದೇ ೧೭ ಕೊನೆಯ ದಿನವಾಗಿದೆ.

ಇದೇ ಮೊದಲ ಬಾರಿಗೆ ಮಂಡಳಿಯು ವರ್ಷದಲ್ಲಿ ಮೂರು ಬಾರಿ ಪರೀಕ್ಷೆ ಬರೆಯುವ ಅವಕಾಶ ಕಲ್ಪಿಸಿದೆ. ಒಂದು ವೇಳೆ ೨ನೇ ಪರೀಕ್ಷೆ ಫಲಿತಾಂಶವು ಸಮಾಧಾನವಾಗದವರು ಪರೀಕ್ಷೆ ಮೂರನ್ನು ಬರೆಯಬಹುದು.

ಇದ್ಯಾವುದೂ ಪೂರಕ ಪರೀಕ್ಷೆ ಆಗಿರುವುದಿಲ್ಲ. ಮೂರು ಪರೀಕ್ಷೆಗಳಲ್ಲಿ ಒಟ್ಟಾರೆ ಅಥವಾ ವಿಷಯವಾರು ಉತ್ತಮ ಫಲಿತಾಂಶವನ್ನು ಆಯ್ಕೆ ಮಾಡಿಕೊಳ್ಳುವ ವಿಶೇಷ ಅವಕಾಶ ವಿದ್ಯಾರ್ಥಿಗಳದ್ದಾಗಿದೆ.

*****************

ಹಾಸನದಲ್ಲಿ ಎಸ್ ಎಸ್ ಎಲ್‌ಸಿ ಯಲ್ಲಿ ಸಮಾನ ಅಂಕ ಪಡೆದು ಅಚ್ಚರಿ ಮೂಡಿಸಿದ್ದ ಅವಳಿ ಸಹೋದರಿಯರು ದ್ವಿತೀಯ ಪಿಯುಸಿಯಲ್ಲೂ ಮತ್ತೆ ಸಮಾನ ಅಂಕ ಪಡೆಯೋ ಮೂಲಕ ಎಲ್ಲರೂ ಬೆರಗಾಗುವಂತೆ ಮಾಡಿದ್ದಾರೆ

ಈ ಹಿಂದೆ ಹಾಸನದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಉಪ ನಿರ್ದೇಶಕರಾಗಿದ್ದ ವಿನೋದ್ ಚಂದ್ರ ಹಾಗು ಕನ್ನಿಕಾ ದಂಪತಿಯ ಚುಕ್ಕಿ ಚಂದ್ರ ಹಾಗು ಇಬ್ಬನಿ ಚಂದ್ರ ಸಹೋದರಿಯರು ಎಸ್ ಎಸ್ ಎಲ್ ಸಿ ಯಲ್ಲಿ ೬೨೫ಕ್ಕೆ ೬೨೦ ಸಮಾನ ಅಂಕ ಗಳಿಸಿ ಅಂಕಪಟ್ಟಿಯಲ್ಲು ಅವಳಿಗಳಾಗಿ ಅಚ್ಚರಿ ಮೂಡಿಸಿದ್ದರು. ಇದೀಗ ಎರಡು ವರ್ಷಗಳ ಬಳಿಕ ಮತ್ತೊಮ್ಮೆ ಅಚ್ಚರಿ ಮೂಡಿಸಿದ್ದಾರೆ.

*********ಮುಕ್ತಾಯ********